ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	837
ಸದಸ್ಯರ ಹೆಸರು	:	ಶ್ರೀ ಎನ್.ಎಸ್.ಭೋಸರಾಜು
ಉತ್ತರಿಸುವ ದಿನಾಂಕ	:	11/03/2020
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಒಟ್ಟು ವಸತಿ ನಿಲಯಗಳು ಎಷ್ಟು; ಸದರಿ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಸದರಿ ವಸತಿ ನಿಲಯಗಳಲ್ಲಿ ಇರುವ ಖಾಯಂ ವಾರ್ಡನ್‌ಗಳ ಸಂಖ್ಯೆ ಎಷ್ಟು ಸ್ವಂತ ಕಟ್ಟಡ ಹೊಂದಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು;</td><td>
ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸುತ್ತಿರುವ ವಿದ್ಯಾರ್ಥಿನಿಲಯಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ವಿವರ</th><th>ಪರಿಶಿಷ್ಟ ಜಾತಿ</th><th>ಪರಿಶಿಷ್ಟ ಪಂಗಡ</th></tr>
<tr><td>1</td><td>ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು</td><td>46</td><td>10</td></tr>
<tr><td>2</td><td>ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು</td><td>27</td><td>10</td></tr>
<tr><td></td><td>ಒಟ್ಟು</td><td>73</td><td>20</td></tr>
</table>
<table>
<tr><th>ಕ್ರ. ಸಂ</th><th>ವಿವರ</th><th>ಪರಿಶಿಷ್ಟ ಜಾತಿ</th><th>ಪರಿಶಿಷ್ಟ ಪಂಗಡ</th></tr>
<tr><td>1</td><td>ವಿದ್ಯಾರ್ಥಿನಿಲಯಗಳಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ</td><td>8917</td><td>4253</td></tr>
</table>
ಸದರಿ ವಸತಿ ನಿಲಯಗಳಲ್ಲಿ ಒಟ್ಟು 54 ಖಾಯಂ ವಾರ್ಡನ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಉಳಿದ ವಿದ್ಯಾರ್ಥಿನಿಲಯಗಳಲ್ಲಿ ವಾರ್ಡನ್‌ಗಳನ್ನು ಹೆಚ್ಚುವರಿ ಪ್ರಭಾರದಲ್ಲಿರಿಸಿ ನಿರ್ವಹಿಸಲಾಗುತ್ತಿದೆ.
ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ ಒಟ್ಟು 93 ವಿದ್ಯಾರ್ಥಿ ನಿಲಯಗಳ ಪೈಕಿ 62 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿವೆ. 05 ವಿದ್ಯಾರ್ಥಿ ನಿಲಯ ಕಟ್ಟಡಗಳ ಕಾಮಗಾರಿ ಪ್ರಗತಿಯಲ್ಲಿವೆ. 17 ನಿವೇಶನ ದೊರೆತಿದ್ದು, ಸ್ವಂತ ಕಟ್ಟಡ ನಿರ್ಮಿಸಲು ಕ್ರಮ ವಹಿಸಲಾಗುವುದು.
</td></tr>
</table>

ಆ)	ವಸತಿ ನಿಲಯಗಳಲ್ಲಿ ಮಂಜೂರಾಗಿರುವ ಸಂಖ್ಯೆಗಳಿಗಿಂತ ಹೆಚ್ಚು ವಿದ್ಯಾರ್ಥಿಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ಬಂದಿದೆ. ಸರ್ಕಾರದ ಆದೇಶ ಸಂಖ್ಯೆ ಸಕಇ 124 ಪಕವಿ 2019 ದಿನಾಂಕ:17-07-2019 ರನ್ವಯ ಇಲಾಖೆಯ ಪರಿಶಿಷ್ಟ ಜಾತಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ನೀಡಲಾಗುತ್ತಿದೆ. ಇದರಿಂದ ಇಲಾಖೆ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯ ವಿದ್ಯಾರ್ಥಿಗಳು ದಾಖಲಾಗಿರುತ್ತಾರೆ ಈ ಬಗ್ಗೆ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ದಾಖಲಾಗಿರುವ ನಿಲಯಗಳಲ್ಲಿನ ಮಂಜೂರಾತಿ ಸಂಖ್ಯೆಯನ್ನು ಹೆಚ್ಚಳ ಮಾಡಲು ಕ್ರಮವಹಿಸಲಾಗಿದೆ. ಹಾಲಿ ಇರುವ ಸ್ವಂತ ಕಟ್ಟಡಗಳಲ್ಲಿ ಸೂಕ್ತ ಸ್ಥಳವಕಾಶ ಇರುವ ಕಡೆ ಹೆಚ್ಚುವರಿ ಕೊಠಡಿ ಸ್ನಾನ ಗೃಹ, ಶೌಚಾಲಯ ನಿರ್ಮಿಸಿಕೊಡಲಾಗುತ್ತಿದೆ. ಬಾಡಿಗೆ ಕಟ್ಟಡಗಳಲ್ಲಿ ಸ್ಥಳಾವಕಾಶ ಇಲ್ಲದ ಕಡೆ ಹೆಚ್ಚುವರಿ ಕಟ್ಟಡ ಬಾಡಿಗೆ ಪಡೆದು ವಿದ್ಯಾರ್ಥಿಗಳಿಗೆ ಸ್ಥಳಾವಕಾಶ ಕಲ್ಪಿಸಲಾಗುತ್ತಿದೆ.

ಸಕಇ 167 ಪಕವಿ 2020

(ಗೋವಿಂದ ಎಂ.ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು